RNU AIR DHARWAD

NOVEMBER 25, 2026

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಮುಖ್ಯಾಂಶಗಳು:

- ಪಶುಸಂಗೋಪನಾ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದ ಹೆಚ್ಚಿನ ಆದ್ಯತೆ ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ.
- ರಾಜ್ಯದಲ್ಲಿ ಹೆಚ್ಚುವರಿಯಾಗಿ 6 ಸಾವಿರದ 342 ಗ್ರಾಮ ಗ್ರಂಥಾಲಯಗಳ ಆರಂಭ ಸಚಿವ ಈಶ್ವರ ಖಂಡ್ರೆ.
- ಬೆಳಗಾವಿಯಲ್ಲಿ ಡಿಸೆಂಬರ್ 2ರಿಂದ 11ರ ವರೆಗೆ ವಿಧಾನಮಂಡಲದ ಚಳಿಗಾಲದ ಅಧಿವೇಶನ; ರಾಜ್ಯದ ಸಮಗ್ರ ಅಭಿವೃದ್ಧಿಯತ್ತ ಲಕ್ಷ್ಯ –ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್.
- ಇಂದು ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ದಿನಾಚರಣೆ. ರಾಜ್ಯಾದ್ಯಂತ ರಕ್ತದಾನ ಶಿಬಿರಗಳ ಆಯೋಜನೆ.

ವಾರ್ತೆಗಳ ವಿವರ...

<><><>

ಪಶುಸಂಗೋಪನಾ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಪಶುಸಂಪತ್ತಿನ ಸಂರಕ್ಷಣೆ ಹಾಗೂ ರೈತರಿಗೆ ಗುಣಮಟ್ಟದ ಪಶುವೈದ್ಯಕೀಯ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಜಿ.ಪರಮೇಶ್ವರ ಹೇಳಿದ್ದಾರೆ. ತುಮಕೂರಿನಲ್ಲಿ ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕರ ಕಚೇರಿ ಆವರಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಕೇಂದ್ರ ಸರ್ಕಾರದ ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆಯಡಿ ತುಮಕೂರು ಜಿಲ್ಲೆಯಲ್ಲಿ ಈಗಾಗಲೇ 120 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ.

ಹೆಚ್ಚುವರಿಯಾಗಿ 400 ಫಲಾನುಭವಿಗಳನ್ನು ಆಯ್ಕೆ ಮಾಡಿ ಸಹಾಯಧನ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಜಾನುವಾರುಗಳಿಗೆ ಲಸಿಕೆ ನೀಡುವ ಕಾರ್ಯಕ್ರಮದಲ್ಲಿ ತುಮಕೂರು ಜಿಲ್ಲೆ ರಾಜ್ಯದಲ್ಲಿಯೇ ಮೊದಲ ಸ್ಥಾನದಲ್ಲಿದೆ. ಜನರ ಜೀವನೋಪಾಯ, ಕೃಷಿ ಚಟುವಟಿಕೆ ಹಾಗೂ ಗ್ರಾಮೀಣ ಆರ್ಥಿಕತೆಯ ದೃಷ್ಟಿಯಿಂದ ಪಶುಸಂಗೋಪನಾ ಇಲಾಖೆ ಅತ್ಯಂತ ಮಹತ್ವದ್ದಾಗಿದೆ. ಈ ಇಲಾಖೆಯ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಮುಂದಿನ ದಿನಗಳಲ್ಲಿಯೂ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ತಿಳಿಸಿದರು.

<><><>

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು, ಮಕ್ಕಳು ಹಾಗೂ ಯುವಜನರಲ್ಲಿ ಓದುವ ಹವ್ಯಾಸ ಬೆಳೆಸುವ ಮತ್ತು ಜ್ಞಾನದ ಬೆಳಕನ್ನು ಪ್ರತಿಯೊಂದು ಹಳ್ಳಿಗೂ ತಲುಪಿಸುವ ಉದ್ದೇಶದಿಂದ ರಾಜ್ಯಾದ್ಯಂತ ಹೆಚ್ಚುವರಿಯಾಗಿ 6 ಸಾವಿರದ 342 ಗ್ರಾಮ ಗ್ರಂಥಾಲಯಗಳನ್ನು ಆರಂಭಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನ ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಈ ಗ್ರಾಮ ಗ್ರಂಥಾಲಯಗಳಿಗೆ ಚಾಲನೆ ನೀಡುವುದರೊಂದಿಗೆ, ರಾಜ್ಯದ ಎಲ್ಲಾ 6 ಸಾವಿರದ 342 ಗ್ರಾಮ ಗ್ರಂಥಾಲಯಗಳು ಕಾರ್ಯಾರಂಭಿಸಿರುವುದನ್ನು ಅಧಿಕೃತವಾಗಿ ಘೋಷಿಸಿದರು. ಈಗಾಗಲೇ ಕಾರ್ಯನಿರ್ವಹಿಸುತ್ತಿರುವ 5 ಸಾವಿರದ 888 ಅರಿವು ಕೇಂದ್ರಗಳ ಜೊತೆಗೆ, ಈ ಹೊಸ ಗ್ರಾಮ ಗ್ರಂಥಾಲಯಗಳು ಗ್ರಾಮೀಣ ಮಕ್ಕಳಿಗೆ ಪುಸ್ತಕ ಓದುವ, ಜ್ಞಾನ ಸಂಪಾದಿಸುವ ಹಾಗೂ ಕಲಿಕೆಯ ಅವಕಾಶಗಳನ್ನು ಮತ್ತಷ್ಟು ವಿಸ್ತರಿಸಲಿವೆ. ಅರಿವು ಕೇಂದ್ರಗಳಲ್ಲಿ 6 ರಿಂದ, 18 ವರ್ಷದೊಳಗಿನ ಮಕ್ಕಳಿಗೆ ಉಚಿತ ಗ್ರಂಥಾಲಯ ಸದಸ್ಯತ್ವ ನೀಡಲಾಗಿದ್ದು, ಈಗಾಗಲೇ 51 ಲಕ್ಷಕ್ಕೂ ಹೆಚ್ಚು ಮಕ್ಕಳು ಸದಸ್ಯತ್ವ ಪಡೆದಿದ್ದಾರೆ. ಜೊತೆಗೆ, ಅರಿವು ಕೇಂದ್ರಗಳ ಗ್ರಂಥಪಾಲಕರಿಗೆ ಮಾಸಿಕ 19 ಸಾವಿರದ 201 ಗೌರವಧನವನ್ನು ಖಾತ್ರಿಪಡಿಸಲಾಗಿದೆ ಎಂದು ಸಚಿವ ಈಶ್ವರ ಖಂಡ್ರೆ ಹೇಳಿದರು.

<><><>

ಎ.ಪಿ.ಎಲ್.ನವರಿಗೆ ಎ.ಬಿ.ಆರ್.ಕೆ. ಆರೋಗ್ಯ ಶ್ರೀ ಯೋಜನೆಯಡಿ ಈ ಹಿಂದೆ ಜಾರಿಗೆ ತಂದಿದ್ದ ಶೇ. 70ರಷ್ಟು ಉಚಿತ ಚಿಕಿತ್ಸೆ ವ್ಯವಸ್ಥೆಯನ್ನು ರದ್ದು ಮಾಡಿ, ಶೇ. 30ಕ್ಕೆ ಇಳಿಕೆ ಮಾಡಲಾಗಿದೆ. ಜನರಲ್ ವಾರ್ಡ್‌ಗಳಲ್ಲಿ ಚಿಕಿತ್ಸೆ ಪಡೆಯುವ ಎ.ಪಿ.ಎಲ್.ನವರಿಗೂ ಉಚಿತ ಚಿಕಿತ್ಸೆಯ ವ್ಯವಸ್ಥೆ ಆಗುವ ನಿಟ್ಟಿನಲ್ಲಿ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಆರೋಗ್ಯ ಖಾತೆ ಸಚಿವ ಯು.ಟಿ. ಖಾದರ್ ಹೇಳಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು; ಕಿಡ್ನಿ ವೈಫಲ್ಯದಿಂದ ಬಳಲುತ್ತಿರುವ ರೋಗಿಗಳ ಅನುಕೂಲಕ್ಕಾಗಿ ರಾಜ್ಯಾದ್ಯಂತ ಒಟ್ಟು 169 ಸರ್ಕಾರಿ ಡಯಾಲಿಸಿಸ್ ಕೇಂದ್ರಗಳಲ್ಲಿ 639 ಡಯಾಲಿಸಿಸ್ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದರು. ವಾರ್ಷಿಕ 5 ಲಕ್ಷ ಡಯಾಲಿಸಿಸ್ ಸೆಷನ್ಸ್‌ಗಳನ್ನು ನಡೆಸಲಾಗುತ್ತಿದ್ದು, ರೋಗಿಗಳ ಸುರಕ್ಷತೆ ಮತ್ತು ಗುಣಮಟ್ಟದ ಚಿಕಿತ್ಸೆಯ ದೃಷ್ಟಿಯಿಂದ, ಸರ್ಕಾರಿ ಡಯಾಲಿಸಿಸ್ ಕೇಂದ್ರಗಳಲ್ಲಿ ಬಳಸುವ ಡಯಲೈಸರ್ ಉಪಕರಣವನ್ನು ಕೇವಲ ಒಂದುಬಾರಿ ಮಾತ್ರ

ಬಳಸಲು (ಒನ್ ಟೈಮ ಯೂಸ್) ನಿರ್ಧರಿಸಲಾಗಿದ್ದು, ಇದಕ್ಕೆ ಪೂರಕವಾಗಿಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದರು.

<><><>

ಪೋಷಕರನ್ನು ಕಳೆದುಕೊಂಡ ಮಕ್ಕಳು ಯಾವುದೇ ಕಾರಣಕ್ಕೂ ಎದೆಗುಂದುವ ಅವಶ್ಯಕತೆಯಿಲ್ಲ. ಇಡೀ ಸರ್ಕಾರವೇ ನಿಮ್ಮ ಪೋಷಕರಾಗಿ ನಿಂತಿದ್ದು, ನಿಮಗೆ ಸಕಲ ಸೌಕರ್ಯಗಳನ್ನು ನೀಡಲು ನಾವು ಬದ್ಧರಾಗಿದ್ದೇವೆ ಎಂದು **ಜಲಸಂಪನ್ಮೂಲ** ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ಭರವಸೆ ನೀಡಿದ್ದಾರೆ. ಮಂಡ್ಯದಲ್ಲಿ 'ಮಕ್ಕಳ ಉತ್ಸವ' ಉದ್ಘಾಟಿಸಿ ಮಾತನಾಡಿದ ಅವರು; "ಈ ದೇಶ ಮತ್ತು ನಾಡು ಸದಾ ನಿಮ್ಮೊಂದಿಗಿದೆ. ಮಕ್ಕಳು ಕೇವಲ ತಮ್ಮ ವಿದ್ಯಾಭ್ಯಾಸ ಮತ್ತು ಸಾಧನೆಯತ್ತ ಮಾತ್ರ ಗಮನಹರಿಸಬೇಕು. ನಿಮಗೆ ಯಾವುದೇ ರೀತಿಯ ಅಡಚಣೆ ಅಥವಾ ಸಮಸ್ಯೆಗಳು ಎದುರಾದರೂ ತಕ್ಷಣವೇ ಸ್ಥಳೀಯ ಶಾಸಕರು ಅಥವಾ ಜಿಲ್ಲಾಧಿಕಾರಿಗಳ ಗಮನಕ್ಕೆ ತನ್ನಿ. ಸದಾ ನಿಮ್ಮ ಸೇವೆಗಾಗಿ ನಾವು ಸಿದ್ಧರಿದ್ದೇವೆ" ಎಂದು ಮಕ್ಕಳಲ್ಲಿ ಆತ್ಮಸ್ಥೈರ್ಯ ತುಂಬಿದರು.

<><><>

ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಬರುವ ಡಿಸೆಂಬರ್ 2ರಿಂದ 11ರ ವರೆಗೆ ನಡೆಯಲಿರುವ ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನ ರಾಜ್ಯದ ಸಮಗ್ರ ಅಭಿವೃದ್ಧಿ ಹಾಗೂ ಜನಸಾಮಾನ್ಯರ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಪರಿಣಾಮಕಾರಿ ವೇದಿಕೆಯಾಗಲಿದೆ ಎಂದು ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿವೇಶನದಲ್ಲಿ ಅಂಗವಿಕಲರ ವಿಚಾರವಾಗಿ ವಿಶೇಷ ಚರ್ಚೆಗೆ ಅವಕಾಶ ನೀಡಲಾಗುವುದು. ಇದರೊಂದಿಗೆ ಆಶಾ ಕಾರ್ಯಕರ್ತೆಯರ ಬೇಡಿಕೆ, ಕಬ್ಬು ಬೆಳೆಗಾರರ ಸಂಕಷ್ಟ, ಬರ ಪರಿಸ್ಥಿತಿ ಹಾಗೂ ಕಾರ್ಮಿಕರ ಸಮಸ್ಯೆಗಳ ಮೇಲೂ ಸದನದಲ್ಲಿ ಬೆಳಕು ಚೆಲ್ಲಲಾಗುವುದು ಎಂದರು. ಅಗತ್ಯ ಬಿದ್ದರೆ ತಡರಾತ್ರಿಯವರೆಗೂ ಕಲಾಪ ನಡೆಸಲು ಸಿದ್ದವಿದ್ದು, ಕಲಾಪ ಸಲಹಾ ಸಮಿತಿ ಸಭೆಯಲ್ಲಿ ಚರ್ಚಿಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು. ಅಧಿವೇಶನದಲ್ಲಿ ಮತಾಂತರ ನಿಷೇಧ ಕಾಯ್ದೆ, ಗೋಹತ್ಯೆ ನಿಷೇಧ ಕಾಯ್ದೆ ಸೇರಿದಂತೆ ಇತರ ವಿಧೇಯಕಗಳು ಅಥವಾ ತಿದ್ದುಪಡಿಗಳ ಬಗ್ಗೆ ಸದ್ಯಕ್ಕೆ ಯಾವುದೇ ಮಾಹಿತಿ ಬಂದಿಲ್ಲ ಎಂದು ಸಲೀಂ ಅಹ್ಮದ್ ಸ್ಪಷ್ಟಪಡಿಸಿದರು.

<><><>

ಇಂದು ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ದಿನಾಚರಣೆ. ಇದರ ಅಂಗವಾಗಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಹಾಗೂ ವಿವಿಧ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ, ರಕ್ತದಾನ ಶಿಬಿರ ರಾಜ್ಯಾದ್ಯಂತ ಜರುಗಲಿದೆ.

ಅಪಘಾತ ಮತ್ತು ಇತರೆ ತೀವ್ರ ಗಂಭೀರ ಸ್ಥಿತಿಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ, ರಕ್ತದ ಅವಶ್ಯಕತೆ ಅತ್ಯಂತ ಹೆಚ್ಚಾಗಿದ್ದು, ತುರ್ತು ಸಂದರ್ಭದಲ್ಲಿ ರಕ್ತದ ಲಭ್ಯತೆ ಜೀವ ಉಳಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ. 18 ವರ್ಷ ಮೇಲ್ಪಟ್ಟ, ಆರೋಗ್ಯವಂತ ಯುವಕರು ಹಾಗೂ ಯುವತಿಯರು, ರಕ್ತದಾನ ಮಾಡಬಹುದು. ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ ಸೇರಿದಂತೆ, ಜಿಲ್ಲೆಯ ಒಟ್ಟು 8 ಸ್ಥಳಗಳಲ್ಲಿ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ರಕ್ತದಾನ ಶಿಬಿರ ಆಯೋಜಿಸಲಾಗಿದೆ. ರಕ್ತದಾನದ ಕುರಿತು ಪ್ರದೇಶ ಸಮಾಚಾರಕ್ಕೆ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಹುಬ್ಬಳ್ಳಿಯ ನವನಗರದ, ಕ್ಯಾನ್ಸರ್ ಆಸ್ಪತ್ರೆಯ, Blood Bank Officer, ಡಾಕ್ಟರ್ ಉಮೇಶ ಹಳ್ಳಿಕೇರಿ.

<><><>

ಡಾಕ್ಟರ್ ಉಮೇಶ ಹಳ್ಳಿಕೇರಿ ಧ್ವನಿ –42– ಸೆಕೆಂದುಗಳು

<><><>

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ವಿವಿಧ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಬಗ್ಗೆ ವ್ಯಕ್ತಿವಾರು ಮಾಹಿತಿ ಕ್ರೋಢೀಕರಿಸಿಕೊಳ್ಳಲು ವಿಶೇಷ ಆ್ಯಪ್ ರಚಿಸಲಾಗುವುದು ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಮತ್ತು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ ತಿಳಿಸಿದ್ದಾರೆ. ಮೈಸೂರಿನಲ್ಲಿ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿ; ಕೆ.ಆರ್.ಐ.ಡಿ.ಎಲ್ ವತಿಯಿಂದ, ಹಾಡಿಗಳಲ್ಲಿ 100 ಮನೆಗಳು ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿದ್ದು, ಇದರಲ್ಲಿ 15 ಮನೆ ನಿರ್ಮಾಣ ಕಾರ್ಯ ಪೂರ್ಣವಾಗಿದ್ದು, ಉಳಿದ 85 ಮನೆಗಳು ವಿವಿಧ ಹಂತದಲ್ಲಿದೆ. ಮನೆ ನಿರ್ಮಾಣ ಮಾಡಲು ಸರ್ಕಾರದ ಹಂತದಲ್ಲಿ ಅನುದಾನದ ಕೊರತೆ ಇಲ್ಲ. ಅಧಿಕಾರಿಗಳು ವಿಶೇಷ ನಿಗಾ ವಹಿಸಿ ಮನೆಗಳನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

<><><>

ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ತ್ವರಿತವಾಗಿ ಸ್ಪಂದಿಸಲು ಅನುಕೂಲವಾಗುವಂತೆ ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ಪ್ರತ್ಯೇಕ ಸಹಾಯವಾಣಿ ಮತ್ತು ಕಾಲ್ ಸೆಂಟರ್ ಆರಂಭಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ತಿಳಿಸಿದ್ದಾರೆ. ಕಾರವಾರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು; ದೌರ್ಜನ್ಯ ಸಂದರ್ಭದಲ್ಲಿ ಸಂತ್ರಸ್ಥರು ತಕ್ಷಣ ಮಾಹಿತಿ ನೀಡಲು ಮತ್ತು ಆಯೋಗದಿಂದ ಸ್ಪಂದಿಸಲು ಪ್ರತ್ಯೇಕ ಸಹಾಯವಾಣಿ ಮತ್ತು ಕಾಲ್ ಸೆಂಟರ್ ಸೌಲಭ್ಯ ಅಗತ್ಯವಿದೆ. ಆಯೋಗದ ಮೂಲಕ ಸಂತ್ರಸ್ಥ ಮಹಿಳೆ ಮತ್ತು ಮಕ್ಕಳ ಮೇಲಿನ ಪ್ರಕರಣಗಳ ಕುರಿತು ಸಂಬಂಧಪಟ್ಟ ಇಲಾಖೆಗಳ ಮೂಲಕ ತ್ವರಿತವಾಗಿ

ಸ್ಪಂದಿಸಲು ಸಾಧ್ಯವಾಗಲಿದೆ. ಸಹಾಯವಾಣಿ ಮತ್ತು ಕಾಲ್ ಸೆಂಟರ್ ಆರಂಭಕ್ಕೆ ಸಲ್ಲಿಸಿರುವ ಪ್ರಸ್ತಾವನೆಗೆ ಸರ್ಕಾರದಿಂದ ಅಗತ್ಯ ಅನುದಾನ ದೊರೆತಲ್ಲಿ ಶೀಘ್ರದಲ್ಲಿ ಆರಂಭಿಸಲಾಗುವುದು ಎಂದರು.

<><><>

ಬೆಂಗಳೂರು ಬೊಮ್ಮನಹಳ್ಳಿಯ ಗಾರ್ಮೆಂಟ್ಸ್ ಕಾರ್ಮಿಕರು ಮುಂದಿಟ್ಟಿದ್ದ PF ಹಣ ಹಿಂಪಡೆಯುವಿಕೆಯ ಸಮಸ್ಯೆಗಳಿಗೆ ಕೇವಲ 60 ದಿನಗಳೊಳಗೆ ಕೇಂದ್ರ ಸರ್ಕಾರ ಮಹತ್ವದ ಪರಿಹಾರ ಕಲ್ಪಿಸಿದೆ ಎಂದು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಅವರು ತಿಳಿಸಿದ್ದಾರೆ. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವರಾದ ಮನ್ಸುಖ್ ಮಾಂಡವೀಯ ಅವರು, ಗಾರ್ಮೆಂಟ್ಸ್ ಕಾರ್ಮಿಕರೊಂದಿಗೆ ನಡೆಸಿದ ವರ್ಚುವಲ್ ಸಂವಾದದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಕೊನೆಯಲ್ಲಿ ಮತೊಮ್ಮೆ ಮುಖ್ಯಾಂಶಗಳು:

- **ಪಶುಸಂಗೋಪನಾ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದ ಹೆಚ್ಚಿನ ಆದ್ಯತೆ ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ.**

- **ರಾಜ್ಯದಲ್ಲಿ ಹೆಚ್ಚುವರಿಯಾಗಿ 6 ಸಾವಿರದ 342 ಗ್ರಾಮ ಗ್ರಂಥಾಲಯಗಳ ಆರಂಭ ಸಚಿವ ಈಶ್ವರ ಖಂಡ್ರೆ.**

- **ಬೆಳಗಾವಿಯಲ್ಲಿ ಡಿಸೆಂಬರ್ 2ರಿಂದ 11ರ ವರೆಗೆ ವಿಧಾನಮಂಡಲದ ಚಳಿಗಾಲದ ಅಧಿವೇಶನ; ರಾಜ್ಯದ ಸಮಗ್ರ ಅಭಿವೃದ್ಧಿಯತ್ತ ಲಕ್ಷ್ಯ –ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್.**

- **ಇಂದು ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ದಿನಾಚರಣೆ. ರಾಜ್ಯಾದ್ಯಂತ ರಕ್ತದಾನ ಶಿಬಿರಗಳ ಆಯೋಜನೆ.**

<><><>

ಇಲ್ಲಿಗೆ **ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ**

<><><><><><><><><><>